# ಶಾಲಾ ಪ್ರವಾಸ ಹೇಗಿರಬೇಕು?

**ಯಾವ ವಯಸ್ಸಿನ ಮಕ್ಕಳನ್ನು ಎಂತಹ ಸ್ಥಳಕ್ಕೆ ಕರೆದೊಯ್ಯಬೇಕು ಎನ್ನುವ ವಿವೇಚನೆ ಶಿಕ್ಷಕರಲ್ಲಿ ಇಲ್ಲದಿದ್ದರೆ ಶಾಲಾ ಪ್ರವಾಸದಿಂದ ಹೆಚ್ಚೇನೂ ಪ್ರಯೋಜನ ಆಗುವುದಿಲ್ಲ.**

★ ಸೌಮ್ಯ ಬೀನಾ



ಚಿತ್ರ: ಇರ್ಷಾದ್ ಮೊಹಮ್ಮದ್

ಡಿಸೆಂಬರ್ – ಜನವರಿ ಶಾಲಾ ಮಕ್ಕಳ ಪ್ರವಾಸ ಕಾಲ. ಸಾಮಾನ್ಯವಾಗಿ ಎಲ್ಲ ಶಾಲೆಗಳಲ್ಲಿ ಮಕ್ಕಳಿಗೆ ಹೆಚ್ಚಿನ ಪಾಠದ ಒತ್ತಡವಿಲ್ಲದೇ, ಆಟೋಟ ಸಮಾರಂಭಗಳು, ಶಾಲಾ ವಾರ್ಷಿಕೋತ್ಸವ ಇನ್ನಿತರ ಚಟುವಟಿಕೆಗಳು ನಡೆಯುವ ಕಾಲ. ಇದಕ್ಕೆ ಜೊತೆಯೆಂಬಂತೆ ಮಕ್ಕಳಿಗೆ ಇನ್ನೂ ಹುರುಪಿನ ವಿಚಾರವೆಂದರೆ ಸ್ಕೂಲ್ ಟ್ರಿಪ್, ಶೈಕ್ಷಣಿಕ ಪ್ರವಾಸ. ವಾರಕ್ಕೂ ಮುಂಚಿನಿಂದಲೇ ಮಕ್ಕಳಲ್ಲಿ ಸಡಗರ, ಉತ್ಸಾಹ, ತಯಾರಿ ಎಲ್ಲಾ ಪ್ರಾರಂಭ!

ಶೈಕ್ಷಣಿಕ ಪ್ರವಾಸ ಎಂಬುದು ಶಾಲಾ ಮಕ್ಕಳ ಅಥವಾ ಕಾಲೇಜು ವಿದ್ಯಾರ್ಥಿಗಳ ಕಲಿಕೆಯ ಒಂದು ಪ್ರಮುಖವಾದ ಭಾಗವೆಂದೇ ಹೇಳಬಹುದು. ತಮ್ಮ ಸ್ವಂತ ಅನುಭವದ ಮೇಲೆ, ವೀಕ್ಷಣೆಯ ಮೇರೆಗೆ ಮಕ್ಕಳಿಗೆ ಕಲಿಯುವ ಒಂದು ಅವಕಾಶ. ಕೇವಲ ಪುಸ್ತಕದ ಬದನೇಕಾಯಿ ಆಗದೆ, ಜ್ಞಾನವನ್ನು ಪ್ರಾಯೋಗಿಕವಾಗಿ ಪಡೆಯಲು ಮಾಡಬಹುದಾದ ಒಂದು ಉತ್ತಮ ಪ್ರಯತ್ನವೇ ಶೈಕ್ಷಣಿಕ ಪ್ರವಾಸಗಳ ಕೈಗೊಳ್ಳುವಿಕೆ. ಶೈಕ್ಷಣಿಕ ಪ್ರವಾಸದ ಯೋಜನೆಯಿಂದ ಮಕ್ಕಳಲ್ಲಿ ಇತಿಹಾಸ, ವಾಸ್ತುಶಿಲ್ಪ, ಅಭಿವೃದ್ಧಿ, ಉದ್ಯಮ, ಜನ, ಧರ್ಮ, ಸಂಸ್ಕೃತಿ, ಹಾಡು, ನೃತ್ಯ ಹವಾಮಾನ, ನಿಸರ್ಗ, ಪ್ರಾಣಿ ಪಕ್ಷಿ ಸಂಕುಲ ಮತ್ತು ಪರಿಸರದ ಕುರಿತಾಗಿ ಸಾಕಷ್ಟು ವಿಷಯಗಳು ಅರಿವಿಗೆ ಬರುತ್ತವೆ. ಕಲ್ಪನೆಗೂ ಮೀರಿ ಅವರ ಜ್ಞಾನಶಕ್ತಿ ವಿಸ್ತಾರಗೊಳ್ಳುತ್ತದೆ. ಮಕ್ಕಳಲ್ಲಿ ಒಳ್ಳೆಯ ವ್ಯಕ್ತಿತ್ವವನ್ನು ಹುರಿದುಂಬಿಸಲು ಅನೂಕೂಲವಾಗುತ್ತದೆ.

ಕೇವಲ ಪಾಠದ ವಿಷಯಕ್ಕಾಗಿ ಒಂದೇ ಅಲ್ಲದೆ, ಈ ರೀತಿಯ ಪ್ರವಾಸಗಳು ಮಕ್ಕಳಲ್ಲಿ ಒಗ್ಗಟ್ಟು, ಸಹಬಾಳ್ವೆ, ಏಕತಾನತೆ, ಪರಸ್ಪರ ಸಹಕಾರ, ಸಂತೋಷ, ಹಂಚುವ ಭಾವನೆ, ತಮ್ಮ ವಯಸ್ಸಿಗೆ ತಕ್ಕ ಜವಾಬ್ದಾರಿ ನಿರ್ವಹಣೆ, ಇತರ ವ್ಯಕ್ತಿಯೆಡೆಗೆ ಗೌರವ– ಹೀಗೆ ಇನ್ನೂ ಹಲವು ಬಗೆಯ ಸೌಜನ್ಯ ನಡವಳಿಕೆಗಳನ್ನು ತುಂಬಲು ಮತ್ತು ಮಕ್ಕಳು ಮುಂದೆ ಸಂಭಾವಿತರಾಗಿ ಬೆಳೆಯಲು ಪ್ರೋತ್ಸಾಹ ನೀಡಿದಂತಾಗುತ್ತದೆ. ಪಠ್ಯ ಪುಸ್ತಕದಲ್ಲಿ ಕೇಳಿ ಓದಿ ತಿಳಿಯುವುದಕ್ಕಿಂತಲೂ, ವಾಸ್ತವಿಕವಾಗಿ ನೋಡಿ ಅದರ ಅನುಭವ ಪಡೆಯುವುದು, ಆ ವಸ್ತು ವಿಷಯಕ್ಕೆ ಸಂಬಂಧಿಸಿದಂತೆ ಹೆಚ್ಚಿನ ಮೌಲ್ಯವನ್ನು ಕೊಡುತ್ತದೆ.

ಇದರ ಜೊತೆಗೆ, ಈ ಹಿಂದೆ ನೋಡಿರದ, ಪರಿಚಯವಿಲ್ಲದ ಊರುಗಳಿಗೆ ತಿರುಗಾಡಿ ಅಲ್ಲಿಯ ನೆಲ, ಜಲ, ಜನ, ಪರಿಸ್ಥಿತಿ ಪ್ರತಿಯೊಂದನ್ನೂ ಹತ್ತಿರದಿಂದ ನೋಡಲು ನೆರವಾಗುತ್ತದೆ. ಮಿತ್ರರೊಡನೆ, ಕಲಿಸುವ ಗುರುಗಳೊಂದಿಗೆ ಆತ್ಮೀಯತೆಯನ್ನು ಪಡೆಯಲು ಅವಕಾಶವಾಗುತ್ತದೆ.

## ಹೇಗಿರಬೇಕು?

ಶೈಕ್ಷಣಿಕ ಪ್ರವಾಸ ಹೆಸರೇ ಹೇಳುವಂತೆ, ಮಕ್ಕಳಿಗೆ ನಿತ್ಯದ ಶಾಲಾ ವಾತಾವರಣದಿಂದ ಹೊರ ಕರೆತಂದು, ಅವರಿಗೆ ಒಂದು ಆಕರ್ಷಣೀಯ ರೀತಿಯಲ್ಲಿ ಪಠ್ಯಕ್ಕೆ ಸಂಬಂಧಿಸಿದಂತೆ ಹಾಗೂ ಇನ್ನಿತರ ಹೆಚ್ಚಿನ ವಿಷಯಗಳ ಬಗ್ಗೆ ಮನವರಿಕೆ ಮಾಡಿಕೊಡುವುದು. ತಾವು ನೋಡಿರದ ಬೇರೆ ಯಾವುದೋ ಸ್ಥಳಕ್ಕೆ ತಮ್ಮ ನೆಚ್ಚಿನ ಸಹಪಾಠಿಗಳೊಂದಿಗೆ ಮೋಜು ಮಸ್ತಿ ಮಾಡುತ್ತಾ ಓಡಾಡಿಕೊಂಡು ಬರುವ ಸಂತೋಷ ಮತ್ತು ಸ್ವಾತಂತ್ರ್ಯವನ್ನು ಮಕ್ಕಳೂ ಅಪೇಕ್ಷೆ ಪಡುತ್ತಾರೆ.

ಆದರೆ ಇತ್ತೀಚಿಗೆ ನಾವು ನೋಡುವಂತೆ ಸಾಕಷ್ಟು ಶಾಲೆಗಳಲ್ಲಿ ತಮ್ಮ ಇಚ್ಛೆ ಹಾಗೂ ಅನುಕೂಲಕ್ಕೆ ತಕ್ಕಂತೆ ಪ್ರವಾಸದ ಸ್ಥಳವನ್ನು ತಾವೇ ಗೊತ್ತು ಮಾಡಿ, ಮಕ್ಕಳಿಗೆ ಪ್ರವಾಸ ಕಡ್ಡಾಯಗೊಳಿಸುವುದು ಶಾಲಾ ನಿರ್ವಾಹಕರಿಂದ ಸರ್ವೇ ಸಾಮಾನ್ಯವಾಗಿ ಬಿಟ್ಟಿದೆ. ಶೈಕ್ಷಣಿಕ ಪ್ರವಾಸ ಎಂದರೆ ಕೇವಲ ಯಾವದೋ ದೂರದ ಒಂದು ಪ್ರಸಿದ್ಧ ಸ್ಥಳಕ್ಕೆ ಭೇಟಿ ಕೊಡಬೇಕೆಂದಲ್ಲ. ಆ ಸ್ಥಳವು ಕರೆದುಕೊಂಡು ಹೋಗುತ್ತಿರುವ ಮಕ್ಕಳ ಅರಿವಿನ ಮಟ್ಟಕ್ಕೆ ಇದೆಯೇ ಎಂಬುದರ ಪರಿಶೀಲನೆ ಅಗತ್ಯ. ಹೆಚ್ಚೆಚ್ಚು ಮೋಜು ಮಾಡುವ ಸ್ಥಳಗಳನ್ನು ಆಯ್ದುಕೊಂಡು ಮಕ್ಕಳ ಪೋಷಕರ ಮೇಲೆ ಅತಿಯಾದ ಪ್ರವಾಸದ ವೆಚ್ಚವನ್ನು ಹೇರುವುದೂ ಸರಿಯಲ್ಲ.

ಮೊದಲನೆಯದಾಗಿ ಯಾವ್ಯಾವ ವಯಸ್ಸಿನ ಮಕ್ಕಳಿಗೆ ಯಾವ ಬಗೆಯ ಸ್ಥಳವನ್ನು ಆಯ್ಕೆ ಮಾಡಿಕೊಳ್ಳುವುದು ಸೂಕ್ತ ಎಂಬುದನ್ನು ಮನಗಂಡು, ಆ ವಯಸ್ಸಿನ ಮಕ್ಕಳ ಆರಾಮವನ್ನು ಗಮನದಲ್ಲಿರಿಸಿ, ಎಷ್ಟು ದೂರದ ಪ್ರವಾಸ, ಎಷ್ಟು ದಿನಗಳ ಪ್ರವಾಸ ಎಂದು ತೀರ್ಮಾನಿಸಬೇಕು. ಉದಾಹರಣೆಗೆ, ತೀರಾ